ವಿಷಯ:- ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಸಮಾಜಕಾರ್ಯದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ಪ್ರಾರಂಭಿಸಿರುವುದು.

25(211)

ಶ್ರೀ ಅಶೋಕ ಕಾಟವೆ (ಹುಬ್ಬಳ್ಳಿ):- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಸಮಾಜ ಕಾರ್ಯದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿಗಳನ್ನು ರಾಜ್ಯದ ಕೆಲವು ವಿಶ್ವವಿದ್ಯಾಲಯಗಳು ಪ್ರಾರಂಭಿಸಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈವರೆಗೂ ಪದವಿ ಮತ್ತು ಸ್ನಾತಕೋತ್ತರ ಪದವಿಗಳನ್ನು ಪಡೆದವರ ಸಂಖ್ಯೆ ಎಷ್ಟು? (ವಿಶ್ವವಿದ್ಯಾಲಗಳವಾರು) ಮಾಹಿತಿ ನೀಡುವುದು;

ಇ) ಈ ಪದವೀಧರರಿಗೆ ಸರ್ಕಾರಿ ನೌಕರಿಯಲ್ಲಿ ಆದ್ಯತೆ ಅಥವಾ ಮೀಸಲಾತಿಯನ್ನು ನೀಡುವುದಕ್ಕೆ ಸರ್ಕಾರದವರು ಪರಿಶೀಲಿಸುವರೆ?

ಶ್ರೀ ಬಿ.ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು):-

ಅ) ಬಂದಿದೆ.

ಆ) ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಮಾತ್ರ ಬಿ.ಎಸ್.ಡಬ್ಲ್ಯೂ ಕೋರ್ಸು ಅಸ್ತಿತ್ವದಲ್ಲಿದೆ. ಕರ್ನಾಟಕ ವಿಶ್ವವಿದ್ಯಾಲಯದಲ್ಲಿ 20 ವಿದ್ಯಾರ್ಥಿಗಳು ಬಿ.ಎಸ್.ಡಬ್ಲ್ಯೂ ಪದವಿ ಪಡೆದಿದ್ದಾರೆ.

ಎಂ.ಎಸ್.ಡಬ್ಲ್ಯೂ ವಿವರ ಕೆಳಕಂಡಂತಿದೆ:

ಮೈಸೂರು	375
ಬೆಂಗಳೂರು	419
ಕರ್ನಾಟಕ	278
ಗುಲ್ಬರ್ಗಾ	150
ಮಂಗಳೂರು	568
ಕುವೆಂಪು	ಇಲ್ಲ

ಇ) ಇಲ್ಲ

ವಿಷಯ:- ಅನುದಾನ ರಹಿತ ಖಾಸಗಿ ಪದವಿ ಪೂರ್ವ ಕಾಲೇಜುಗಳಿಗೆ ಅನುದಾನ ಮಂಜೂರು.

26(256)

ಶ್ರೀ ಸಿ.ಚೆನ್ನಿಗಪ್ಪ (ಕೊರಟಗೆರೆ):- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ರಾಜ್ಯದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಖಾಸಗಿ ಪದವಿಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;

ಆ) ಅನುದಾನ ರಹಿತ ಖಾಸಗಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;

ಇ) ಈ ಕಾಲೇಜುಗಳಿಗೆ ಅನುದಾನ ಮಂಜೂರು ಮಾಡಲು ಸರ್ಕಾರದವರು ತೆಗೆದುಕೊಂಡಿರುವ ಕ್ರಮಗಳಾವುವು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):-

ಅ) ಸರ್ಕಾರಿ ಪದವಿ ಪೂರ್ವ ಕಾಲೆಜುಗಳು - 685

ಖಾಸಗಿ ಪದವಿ ಪೂರ್ವ ಕಾಲೇಜುಗಳು - 1134

ಆ) 652

ಇ) ಶಾಶ್ವತ ಅನುದಾನ ರಹಿತವಾಗಿ ಮಂಜೂರಾಗಿರುವ ಖಾಸಗಿ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. ಆದರೂ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ ಆಡಳಿತ ಮಂಡಳಿಗಳಿಗೆ ಸೇರಿದ ಖಾಸಗಿ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ವಿಷಯ:- ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ಶಾಶ್ವತ ಅನುದಾನ ರಹಿತ ಕಾಲೇಜುಗಳು.

27(257)

ಶ್ರೀ ಸಿ.ಚೆನ್ನಿಗಪ್ಪ (ಕೊರಟಗೆರೆ):- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ರಾಜ್ಯದಲ್ಲಿರುವ ಶಾಶ್ವತ ಅನುದಾನರಹಿತ ಕಾಲೇಜುಗಳು ಎಷ್ಟು; ಇದರಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ಕಾಲೇಜುಗಳ ಸಂಖ್ಯೆ ಎಷ್ಟು;

ಆ) ಅನುದಾನ ನೀಡುವ ಬಗ್ಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳಾವುವು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):-

ಅ) ರಾಜ್ಯದಲ್ಲಿ ಒಟ್ಟು 652 ಶಾಶ್ವತ ಅನುದಾನ ರಹಿತ ಕಿರಿಯ ಕಾಲೇಜುಗಳು ಇವೆ. ಇವುಗಳಲ್ಲಿ ಒಟ್ಟು 212 ಕಿರಿಯ ಕಾಲೇಜುಗಳು ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಆಡಳಿತ ಮಂಡಳಿಗೆ ಸೇರಿದ ಕಿರಿಯ ಕಾಲೇಜುಗಳಾಗಿರುತ್ತವೆ.

ಆ) ಶಾಶ್ವತ ಅನುದಾನ ರಹಿತವಾಗಿ ಮಂಜೂರಾಗಿರುವ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಆಡಳಿತ ಮಂಡಳಿಗೆ ಸೇರಿದ ಖಾಸಗಿ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.